316	ಕಬ್ಬಾರೆ–1	41
317	ಕಬ್ಬಾರೆ–2	40
318	ಅಣ್ಣಳ್ಳಿದೊಡ್ಡಿ	26
	ಒಟ್ಟು	**12373**

ಪಶು ಚಿಕಿತ್ಸಾಲಯ ಮಂಜೂರಾತಿ

492 (602) ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ) : ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಬೆಳಗಾವಿ ರಾಯಭಾಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ರಾಯಭಾಗ ಮತ್ತು ಚಿಕ್ಕೋಡಿ ತಾಲ್ಲೂಕಿನಲ್ಲಿ ಹೊಸದಾಗಿ ಪಶು ಚಿಕಿತ್ಸಾಲಯ ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; ಈ ಪ್ರಸ್ತಾವನೆಗಳು ಪ್ರಸ್ತುತ ಯಾವ ಹಂತದಲ್ಲಿವೆ (ಸಂಪೂರ್ಣ ವಿವರ ನೀಡುವುದು)?

ಶ್ರೀ ರೇವೂನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು) :

ಅ) ಬಂದಿದೆ.

ಆ) ರಾಜ್ಯದಲ್ಲಿ ಈಗಾಗಲೇ 637 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇದ್ದು, ಅರ್ಹ ಪದವೀಧರ ಪಶುವೈದ್ಯರ ಕೊರತೆ ಇರುವುದರಿಂದ ಹೊಸದಾಗಿ ಪಶುವೈದ್ಯ ಸಂಸ್ಥೆಗಳನ್ನು ತೆರೆಯುವ ಪ್ರಸ್ತಾವನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.